# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 605
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 21.02.2023
ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ಸರ್ಕಾರದ ವತಿಯಿಂದ ವಿಕಲಚೇತನರಿಗೆ ನೀಡಲಾಗುವ ವಿಶೇಷ ಸವಲತ್ತುಗಳೇನು; (ಪೂರ್ಣ ವಿವರ ನೀಡುವುದು) | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ವಿಕಲಚೇತನರಿಗಾಗಿ ಒದಗಿಸಲಾಗಿರುವ ಸೌಲಭ್ಯಗಳ ವಿವರ ಅನುಬಂಧ–01ರಲ್ಲಿ ಒದಗಿಸಲಾಗಿದೆ |
| 2 | ಸದರಿಯವರ ಶಿಕ್ಷಣದ ಉದ್ದೇಶಕ್ಕಾಗಿ ಏನೇನು ಕಾರ್ಯಕ್ರಮಗಳನ್ನು ರೂಪಿಸಲಾಗಿದೆ; (ವಿವರ ನೀಡುವುದು) | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ವಿಕಲಚೇತನರ ಶಿಕ್ಷಣ ಉದ್ದೇಶಕ್ಕಾಗಿ ರೂಪಿಸಿರುವ ಕಾರ್ಯಕ್ರಮಗಳ ವಿವರವನ್ನು ಅನುಬಂಧ–02ರಲ್ಲಿ ಒದಗಿಸಲಾಗಿದೆ. |
| 3 | ಸದರಿಯವರಿಗೆ ಸರ್ಕಾರಿ/ಅರೆ ಸರ್ಕಾರಿ ಸಂಸ್ಥೆಗಳಲ್ಲಿ ಉದ್ಯೋಗ ನೀಡುವಲ್ಲಿ ಸರ್ಕಾರ ರೂಪಿಸಿರುವ ನಿಯಮಗಳೇನು; (ಪೂರ್ಣ ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 149 ಎಸ್‌ಆರ್‌ಆರ್ 2020, ದಿನಾಂಕ:25.09.2020ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್–ಎ ಮತ್ತು ಗ್ರೂಪ್–ಬಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ವಿಕಲಚೇತನರಿಗೆ ಶೇ.4ರಷ್ಟು ಹಾಗೂ ಗ್ರೂಪ್–ಸಿ ಮತ್ತು ಗ್ರೂಪ್–ಡಿ ಹುದ್ದೆಗಳಲ್ಲಿ ಶೇ.5ರಷ್ಟು ಹುದ್ದೆಗಳನ್ನು ಮೀಸಲಿರಿಸಿ ಆದೇಶಿಸಲಾಗಿರುತ್ತದೆ. (ಅನುಬಂಧ–3ರಲ್ಲಿ ಒದಗಿಸಲಾಗಿದೆ.)<br><br>ಕರ್ನಾಟಕ ಸಿವಿಲ್ ಸೇವಾ(ಸಾಮಾನ್ಯ ನೌಕರಿ ಭರ್ತಿ) ನಿಯಮಗಳು–1977ರ ನಿಯಮ–6(3)(ಎಫ್)ರಲ್ಲಿ ವಿಕಲಚೇತನ ಅಭ್ಯರ್ಥಿಗಳು ಸರ್ಕಾರಿ ಉದ್ಯೋಗಕ್ಕೆ ಅರ್ಜಿ ಸಲ್ಲಿಸುವಾಗ 10 ವರ್ಷಗಳ ವಿನಾಯಿತಿಯನ್ನು ನೀಡಲಾಗಿರುತ್ತದೆ. (ಅನುಬಂಧ–4ರಲ್ಲಿ ಒದಗಿಸಲಾಗಿದೆ.) |
| 4 | ಸ್ವಯಂ ಉದ್ಯೋಗ ಕಲ್ಪಿಸಲು ನೀಡಲಾಗಿರುವ ವಿಶೇಷ ಸವಲತ್ತುಗಳೇನು? | ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನವನ್ನು ಇಲಾಖೆಯಿಂದ ನೀಡಲಾಗುತ್ತದೆ. |

ಮಮಇ 39 ಪಿಹೆಚ್‌ಪಿ 2023

Halappa B A

(ಆಚಾರ ಹಾಲಪ್ಪ ಬಸಪ್ಪ)
ಮಾನ್ಯ ಗಣಿ ಮತ್ತು ಭೂ ವಿಜ್ಞಾನ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.

## ಅನುಬಂಧ-01

### ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ವಿಕಲಚೇತನರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು/ಸೇವಾ ಸೌಲಭ್ಯಗಳು

(ಎ) **ಶೈಕ್ಷಣಿಕ ಯೋಜನೆಗಳು:-**

**1) ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಮತ್ತು ಬೆಂಗಳೂರು ನಗರ ಸೇರಿದಂತೆ 5 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾ ವತಿಯಿಂದ ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**2. ಅಂಧ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:ತರಬೇತಿಕೇಂದ್ರಗಳು**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ. ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುತ್ತಿದ್ದು, 04 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 01 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಾಗೂ 01 ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ 'ತರಬೇತಿಯನ್ನು ನೀಡಲಾಗುತ್ತಿದೆ. ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**5. ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ ನಡೆಯುತ್ತಿರುವ ವಿಶೇಷ ಶಾಲೆಗಳು:**

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.9,300/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.7,800/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.10,200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 9000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ

ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

**6. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:**

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.15,000/- ಗಳಂತೆ ವಾರ್ಷಿಕ 37.50 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

**7. ಕೇಂದ್ರ ಸರ್ಕಾರದಡಿ ವಿಶೇಷ ಶಾಲೆಗಳು:**

ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 02 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು, 02 ಪುನರ್ವಸತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

**8. ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:**

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

**9. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ. ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

**10. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ.

**11. ಬ್ರೈಲ್ ಮುದ್ರಣಾಲಯ:**

ರಾಜ್ಯಾದ್ಯಂತ ವಿಶೇಷ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ಮಕ್ಕಳಿಗೆ ಬ್ರೈಲ್ ಪುಸ್ತಕಗಳನ್ನು ಉಚಿತವಾಗಿ ನೀಡಲು ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದಲ್ಲಿ ಮುದ್ರಿಸಿ ಸರಬರಾಜು ಮಾಡಲಾಗುತ್ತಿದೆ.

**12. ವಿಶೇಷ ಶಿಕ್ಷಕರ ತರಬೇತಿ ಕೇಂದ್ರ ಯೋಜನೆ:**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**(ಬಿ) ಉದ್ಯೋಗ ಮತ್ತು ತರಬೇತಿ:**

**1. ಅಂಗವಿಕಲ ಪುರುಷ ಹಾಗೂ ಮಹಿಳೆಯರ ಸರ್ಕಾರದ ವಸತಿನಿಲಯ:**

ಬೆಂಗಳೂರಿನಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಸರ್ಕಾರದಿಂದ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಸಲಾಗುತ್ತಿದೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

**2. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ವಸತಿ ನಿಲಯಗಳು:**

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಿದಾರರಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಿದ್ದು, ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಮಾತ್ರ ಉಚಿತ ಊಟದ ವ್ಯವಸ್ಥೆ ಇರುತ್ತದೆ.

**3. ಗ್ರಾಮೀಣ ಪುನರ್ವಸತಿ ಯೋಜನೆ:**

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಂಯೋಜಕರು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಪ್ರಸ್ತುತ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸಂಯೋಜಕರ ಮಾಹೆಯಾನ ರೂ.38,000/- ಗೌರವಧನ, ಜಿಲ್ಲಾ ಸಂಯೋಜಕರ ಮಾಹೆಯಾನ ರೂ.19,000/- ಗೌರವಧನ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಮತ್ತು ನಗರ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಹೆಯಾನ ರೂ.9000/- ಗೌರವಧನವನ್ನು ಹಾಗೂ ವಿವಿದ್ದೊದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಹೆಯಾನ ರೂ.15,000/-ಗಳ ಗೌರವಧನವನ್ನು ನೀಡಲಾಗುತ್ತಿದೆ.

**ಮರಣ ಪರಿಹಾರ ನಿಧಿ ಯೋಜನೆ:** ಪ್ರಸ್ತುತ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/-ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

## ಸಿ. ಆರ್ಥಿಕ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳು:

### 1. ಸಮಾಜ ಸೇವಾ ಸಂಕೀರ್ಣ:

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ.

### 2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ.

### 3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

### 4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

### 5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

### 6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ **5 ವರ್ಷಗಳ** ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

7. **ನಿರುದ್ಯೋಗ ಭತ್ಯೆ:-** ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

**(ಡಿ) ಪುನರ್ವಸತಿ ಯೋಜನೆಗಳು:**

1. **ಅಂಗವಿಕಲರಿಗೆ ಸಾಧನ ಸಲಕರಣೆಗಳು :**

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೂಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಗಾಲಿ ಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕ್ರಚಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

2. **ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

3. **ತೀವ್ರತರಹ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :**

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

4. **ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-**

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 17 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ, ಕಲಬುರಗಿ)

5. **ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

**6. ಅಂಧ ವಿದ್ಯಾರ್ಥಿಗಳೀಗೆ ಬ್ರೈಲ್ ಕಿಟ್‌ಗಳ ವಿತರಿಸುವ ಯೋಜನೆ:-**

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ ಅಂಧ ವಿದ್ಯಾರ್ಥಿಗಳಿಗೆ ಟಾಂಕಿಗ್ ಮೊಬೈಲ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾದನೆಗಳನು ಒಳಗೊಂಡ ತಲಾ ರೂ.25000/-ಗಳ ಕಿಟ್‌ಗಳನು ವಿತರಿಸಲಾಗುತಿದೆ.

6. **ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸುವ ಯೋಜನೆ:-**

ಶ್ರವಣದೋಷವುಳ್ಳವರು ಉದ್ಯೋಗಾವಕಾಶದಿಂದ ವಂಚಿತರಾಗುತ್ತಿರುವುದನ್ನು ಮನಗಂಡು ಅವರು ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಲು ಅನುವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸಲಾಗುತ್ತಿದೆ.

**(ಇ). ಸಾಧನೆ ಮತ್ತು ಪ್ರತಿಭೆ ಯೋಜನೆ:**

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

**(ಎಫ್). ನಿರಾಮಯ ಆರೋಗ್ಯ ವಿಮಾ ಯೋಜನೆ :**

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ನಿರಾಮಯ ಆರೋಗ್ಯ ಯೋಜನೆಯಡಿ ಬಡತನ ರೇಖೆಗಿಂತ ಕಡಿಮೆ ಇರುವ ಫಲಾನುಭವಿಗಳಿಗೆ ಒಂದು ಬಾರಿಪ್ರೀಮಿಯಂ ಮೊತ್ತ ರೂ.250/-ಗಳನ್ನು ಮತ್ತು ಬಡತನ ರೇಖೆಗಿಂತ ಮೇಲಿರುವ ಫಲಾನುಭವಿಗಳಿಗೆ, ಒಂದು ಬಾರಿ ಪ್ರೀಮಿಯಂ ಮೊತ್ತ ರೂ.500/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

**(ಜಿ). ಸ್ಪರ್ಧಾ ಚೇತನ ಯೋಜನೆ:-**

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

**(ಹೆಚ್). ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (UNIQUE DISABILITY ID)**ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

# ಅನುಬಂಧ-02

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ ವಿಕಲಚೇತನರ ಶಿಕ್ಷಣ ಉದ್ದೇಶಕ್ಕಾಗಿ ರೂಪಿಸಿರುವ ಕಾರ್ಯಕ್ರಮಗಳ ವಿವರ ಈ ಕೆಳಕಂಡಂತಿದೆ.

**(ಎ) ಶೈಕ್ಷಣಿಕ ಯೋಜನೆಗಳು:-**

**1) ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಮತ್ತು ಬೆಂಗಳೂರು ನಗರ ಸೇರಿದಂತೆ 5 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾ ವತಿಯಿಂದ ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**2. ಅಂಧ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:ತರಬೇತಿ ಕೇಂದ್ರಗಳು**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ. ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುತ್ತಿದ್ದು, 04 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 01 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಾಗೂ 01 ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ. ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**5. ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ ನಡೆಯುತ್ತಿರುವ ವಿಶೇಷ ಶಾಲೆಗಳು:**

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.9,300/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.7,800/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.10,200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 9000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

## 6. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.15,000/-ಗಳಂತೆ ವಾರ್ಷಿಕ 37.50 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

**7. ಕೇಂದ್ರ ಸರ್ಕಾರದಡಿ ವಿಶೇಷ ಶಾಲೆಗಳು:** ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 02 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು, 02 ಪುನರ್ವಸತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

## 8. ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

## 9. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

## 10. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ.

## 11. ಬ್ರೈಲ್ ಮುದ್ರಣಾಲಯ:

ರಾಜ್ಯಾದ್ಯಂತ ವಿಶೇಷ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ಮಕ್ಕಳಿಗೆ ಬ್ರೈಲ್ ಪುಸ್ತಕಗಳನ್ನು ಉಚಿತವಾಗಿ ನೀಡಲು ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದಲ್ಲಿ ಮುದ್ರಿಸಿ ಸರಬರಾಜು ಮಾಡಲಾಗುತ್ತಿದೆ.

## 12. ವಿಶೇಷ ಶಿಕ್ಷಕರ ತರಬೇತಿ ಕೇಂದ್ರ ಯೋಜನೆ:

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

ಅನುಬಂಧ -3


# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಶನಿವಾರ, ೨೬,ಸೆಪ್ಟೆಂಬರ್,೨೦೨೦( ಆಶ್ವಯುಜ,೦೪, ಶಕವರ್ಷ ೧೯೪೨)<br>Bengaluru, SATURDAY, 26, SEPTEMBER, 2020( Aashwayuja,04, ShakaVarsha 1942) | ನಂ. ೪೧೫<br>No. 415 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರನೇಮಕಾತಿಗಳಲ್ಲಿ ಅಂಗವಿಕಲ / ವಿಕಲಚೇತನರಿಗೆ ಕಲ್ಪಿಸಿರುವ ಸಮತಳ ಮೀಸಲಾತಿಯನ್ನು ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ: 1. ದಿನಾಂಕ 01.08.2009ರ ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 128 ಸೇನೆನಿ 2006.

2. ದಿನಾಂಕ 10.06.2013ರ ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 48 ಸೇನೆನಿ 2012.

ಪ್ರಸ್ತಾವನೆ:

1. ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9(1ಎ)ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಗಳಲ್ಲಿ ಅಂಗವಿಕಲರಿಗೆ / ವಿಕಲಚೇತನರಿಗೆ ಶೇಕಡ 5ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿತ್ತು. ಈ ಮೀಸಲಾತಿಯನ್ನು ಜಾರಿಗೊಳಿಸಲು ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಮೀಸಲಾದ ಪ್ರತಿಯೊಂದು ನೇರ ಮೀಸಲಾತಿಯಡಿ 20 ಬಿಂದುಗಳ ಒಂದು ರೋಸ್ಟರನ್ನು ನಿಗದಿಪಡಿಸಿ, ಅದರಲ್ಲಿ ರೋಸ್ಟರಿನ ಪ್ರತಿ 19ನೇ ಬಿಂದುವನ್ನು ಅಂಗವಿಕಲರಿಗೆ/ ವಿಕಲಚೇತನರಿಗೆ ಗುರುತಿಸಲಾಗಿತ್ತು.

2. The Persons with Disabilities (Equal Opportunity, Protection of Rights and Full Participation) Act, 1995 ಜಾರಿಗೆ ಬಂದ ನಂತರದಲ್ಲಿ ಮೇಲ್ಕಂಡ ನಿಯಮಗಳ ನಿಯಮ 9(1ಎ)ಗೆ ದಿನಾಂಕ 03.09.2005ರ ಅಧಿಸೂಚನೆ ಸಂಖ್ಯೆ. ಡಿಪಿಎಆರ್ 50 ಎಸ್ ಆರ್ ಆರ್ 2000ದಲ್ಲಿ ತಿದ್ದುಪಡಿ ಮಾಡಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಂಗವಿಕಲರಿಗೆ/ ವಿಕಲಚೇತನರಿಗೆ ಶೇಕಡ 3ರಷ್ಟು ಹಾಗೂ ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಶೇಕಡ 5ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. ಈ ಸಮತಳ ಮೀಸಲಾತಿಯನ್ನು ಜಾರಿಗೊಳಿಸಲು ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಹಿಂದುಳಿದ ವರ್ಗಗಳಿಗೆ ಮೀಸಲಾದ ಪ್ರತಿಯೊಂದು ನೇರ ಮೀಸಲಾತಿಯಡಿ 20 ಬಿಂದುಗಳ ರೋಸ್ಟರನ್ನು ನಿಗದಿಪಡಿಸಿ, ಅದರಲ್ಲಿ ರೋಸ್ಟರಿನ ಪ್ರತಿ 4ನೇ ಬಿಂದುವನ್ನು ಅಂಗವಿಕಲರಿಗೆ ಗುರುತಿಸಲಾಗಿರುತ್ತದೆ.



www.ksge.in

3. ಮೇಲೆ (1)ರಲ್ಲಿ ಓದಲಾದ ದಿನಾಂಕ 01.08.2009ರ ಆದೇಶದಲ್ಲಿ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ನಿಗದಿಪಡಿಸಿರುವ ಶೇಕಡ 5ರ ಮೀಸಲಾತಿಯಲ್ಲಿ ಶೇ.2ನ್ನು ದೃಷ್ಟಿಮಾಂದ್ಯತೆಯುಳ್ಳವರಿಗೆ, ತಲಾ ಶೇ.1ನ್ನು ಶ್ರವಣ ದೋಷವುಳ್ಳವರಿಗೆ, ಚಲನವಲನ ವೈಕಲ್ಯವುಳ್ಳವರಿಗೆ ಮತ್ತು ಕುಷ್ಠರೋಗದಿಂದ ಗುಣಮುಖರಾದ ಅಂಗವಿಕಲರಿಗೆ/ ಬುದ್ಧಿಮಾಂದ್ಯತೆ/ ಮಾನಸಿಕ ಅಸ್ವಸ್ಥತೆ (Mental retardation/ Mental illness) ಹೊಂದಿರುವವರಿಗೆ ಮೀಸಲಿರಿಸಲು ಆದೇಶಿಸಲಾಗಿರುತ್ತದೆ. ಈ ಮೀಸಲಾತಿಯನ್ನು ಜಾರಿಗೊಳಿಸಲು ದಿನಾಂಕ 04.01.2008ರ ಆದೇಶ ಸಂಖ್ಯೆ: ಸಿಆಸುಇ 53 ಸೇನೆನಿ 2007ರಲ್ಲಿ ನಿಗದಿಪಡಿಸಿರುವ 20 ಬಿಂದುಗಳ ರೋಸ್ಟರನ್ನು 100 ರಿಕ್ತ ಸ್ಥಾನಗಳಿಗೆ ಅನ್ವಯಿಸಿ, ಅದರಲ್ಲಿ 4, 24ನೇ ಬಿಂದುಗಳನ್ನು ದೃಷ್ಟಿಮಾಂದ್ಯತೆಯುಳ್ಳವರಿಗೆ, 44ನೇ ಬಿಂದುವನ್ನು ಶ್ರವಣ ದೋಷವುಳ್ಳವರಿಗೆ, 64ನೇ ಬಿಂದುವನ್ನು ಚಲನವಲನ ವೈಕಲ್ಯ ಇರುವವರಿಗೆ ಮತ್ತು 84ನೇ ಬಿಂದುವನ್ನು ಕುಷ್ಠರೋಗದಿಂದ ಗುಣಮುಖರಾದ ಅಂಗವಿಕಲರಿಗೆ/ ಬುದ್ಧಿಮಾಂದ್ಯತೆ/ ಮಾನಸಿಕ ಅಸ್ವಸ್ಥತೆ ಹೊಂದಿರುವವರಿಗೆ ಮೀಸಲಿರಿಸತಕ್ಕದ್ದೆಂದು ಮತ್ತು ಈ ಬಿಂದುಗಳೆದುರು ನಿರ್ದಿಷ್ಟಪಡಿಸಿದ ಅಂಗವಿಕಲ/ ವಿಕಲಚೇತನ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಬೇರೆ ಅಂಗವಿಕಲತೆ / ವಿಕಲಚೇತನ ಇರುವವರನ್ನು ಆಯ್ಕೆಗೆ ಪರಿಗಣಿಸತಕ್ಕದ್ದೆಂದು ಆದೇಶಿಸಲಾಗಿರುತ್ತದೆ.

4. ಮೇಲೆ (2)ರಲ್ಲಿ ಓದಲಾದ ದಿನಾಂಕ: 10.06.2013ರ ಆದೇಶದಲ್ಲಿ, ದಿನಾಂಕ: 05.09.2005ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 107 ಸೇನೆನಿ 2005ನ್ನು ಪರಿಷ್ಕರಿಸಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಂಗವಿಕಲರಿಗೆ/ ವಿಕಲಚೇತನರಿಗೆ ಕಲ್ಪಿಸಿರುವ ಶೇಕಡ 3ರಷ್ಟು ಸಮತಳ ಮೀಸಲಾತಿಯೂ ಒಳಗೊಂಡಂತೆ ಇತರ ಸಮತಳ ಮೀಸಲಾತಿಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ಸಾಮಾನ್ಯ ಅರ್ಹತೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರತಿ ಹಿಂದುಳಿದ ವರ್ಗಗಳಿಗೆ ಪ್ರತ್ಯೇಕವಾಗಿ ಲಭ್ಯವಾಗುವ ಪ್ರತಿ ನೂರರ ಒಂದು ಸಮೂಹದಲ್ಲಿ ಪ್ರತಿ 4, 44 ಮತ್ತು 84ನೇ ರೋಸ್ಟರ್ ಬಿಂದುಗಳನ್ನು ಅಂಗವಿಕಲ/ ವಿಕಲಚೇತನ ಅಭ್ಯರ್ಥಿಗಳಿಗೆ ಮೀಸಲಿರಿಸತಕ್ಕದ್ದೆಂದು ಆದೇಶಿಸಲಾಗಿದೆ. 4ನೇ ಬಿಂದುವನ್ನು ದೃಷ್ಟಿಮಾಂದ್ಯ (blindness or low vision), 44ನೇ ಬಿಂದುವನ್ನು ಶ್ರವಣದೋಷ (hearing impairment) ಮತ್ತು 84ನೇ ಬಿಂದುವನ್ನು ಚಲನವಲನ ವೈಕಲ್ಯ (locomotor disability or cerebral palsy) ಅಂಗವಿಕಲತೆ ಹೊಂದಿರುವವರಿಗೆ ಮೀಸಲಿರಿಸತಕ್ಕದ್ದೆಂದು ಮತ್ತು ಒಂದು ವೇಳೆ ಈ ಬಿಂದುಗಳೆದುರು ನಿರ್ದಿಷ್ಟಪಡಿಸಿದ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಗುರುತಿಸಲಾದ ಬೇರೆ ಅಂಗವಿಕಲತೆಯುಳ್ಳವರನ್ನು ಈ ಬಿಂದುಗಳೆದುರು ಆಯ್ಕೆಗೆ ಪರಿಗಣಿಸತಕ್ಕದ್ದೆಂದು ಆದೇಶಿಸಲಾಗಿರುತ್ತದೆ. ಸದರಿ ಆದೇಶವು ಭವಿಷ್ಯವರ್ತಿಯಾಗಿ ಜಾರಿಗೆ ಬಂದಿರುತ್ತದೆ. ಈ ಆದೇಶದ ಪೂರ್ವದಲ್ಲಿ ದಿನಾಂಕ: 05.09.2005ರ ಆದೇಶದನ್ವಯ ನಿಗದಿಪಡಿಸಿರುವ ರೋಸ್ಟರನ್ನು ಜಾರಿಗೊಳಿಸಿದ್ದಲ್ಲಿ, ಪ್ರತಿ ವರ್ಗದಡಿಯಲ್ಲಿ ಸಮತಳ ಮೀಸಲಾತಿ ರೋಸ್ಟರಿನ 4ನೇ ಬಿಂದುವನ್ನು ದಾಟಿದ್ದಲ್ಲಿ, 20ನೇ ಬಿಂದುವನ್ನು ತಲುಪದಿದ್ದಲ್ಲಿ, 20ನೆಯ ಬಿಂದುವಿನವರೆಗೆ ಆ ರೋಸ್ಟರನ್ನು ಚಾಲನೆಗೊಳಿಸತಕ್ಕದ್ದೆಂದು ಹಾಗೂ ನಂತರದಲ್ಲಿ ಒಂದನೇ ಬಿಂದುವಿನಿಂದ ಈ ಆದೇಶದಂತೆ ರೋಸ್ಟರನ್ನು ಚಾಲನೆಗೊಳಿಸತಕ್ಕದ್ದೆಂದು ಸದರಿ ಆದೇಶದಲ್ಲಿ ಆದೇಶಿಸಲಾಗಿರುತ್ತದೆ.

5. The Rights of Persons with Disabilities Act, 2016ರ ಕಲಂ 34(1)ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಗಳಲ್ಲಿ ಅಂಗವಿಕಲರಿಗೆ ಶೇಕಡ 4ರಷ್ಟು ಕಡಿಮೆ ಇಲ್ಲದಂತೆ ಸಮತಳ ಮೀಸಲಾತಿಯನ್ನು ಕಲ್ಪಿಸುವಂತೆ ನಿರ್ದೇಶನ ನೀಡಲಾಗಿರುತ್ತದೆ. ಸದರಿ ಕಲಂನ್ನು ಕೆಳಗೆ ಉದ್ಧರಿಸಲಾಗಿದೆ:

*"34. (1) Every appropriate Government shall appoint in every Government establishment, not less than four per cent of the total number of vacancies in the cadre strength in each group of posts meant to be filled with persons with benchmark disabilities of which, one per cent, each shall be reserved for persons with benchmark disabilities under clauses (a), (b) and (c) and one per cent for persons with benchmark disabilities under clauses (d) and (e), namely:*

www.ksge.in

*(a) blindness and low vision;*
*(b) deaf and hard of hearing;*
*(c) locomotor disability including cerebral palsy, leprosy cured, dwarfism, acid attack victims and muscular dystrophy;*
*(d) autism, intellectual disability, specific learning disability and mental illness;*
*(e) multiple disabilities from amongst persons under clauses (a) to (d) including deaf-blindness in the posts identified for each disabilities.*

*Provided that the reservation in promotion shall be in accordance with such instructions as are issued by the appropriate Government from time to time:*

*Provided further that the appropriate Government, in consultation with the Chief Commissioner or the State Commissioner, as the case may be, may, having regard to the type of work carried out in any Government establishment, by notification and subject to such conditions, if any, as may be specified in such notifications exempt any Government establishment from the provisions of this section."*

ಮೇಲ್ಕಂಡ ಅಧಿನಿಯಮದ ಕಲಂ 34(1)ರ ಆಸ್ಪದದನ್ವಯ, ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ಕ್ಕೆ ದಿನಾಂಕ: 29.08.2020ರ ಅಧಿಸೂಚನೆ ಸಂಖ್ಯೆ :ಸಿಆಸುಇ 149 ಸೆನೆನಿ 2020ರಲ್ಲಿ ತಿದ್ದುಪಡಿ ಮಾಡಿ, ನಿಯಮ 2ರಲ್ಲಿ 'Person with Disability' ಎಂಬುದನ್ನು ಪರಿಭಾಷಿಸಲಾಗಿದೆ ಮತ್ತು ನಿಯಮ 9(1ಎ)ರಡಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಂಗವಿಕಲರಿಗೆ/ ವಿಕಲಚೇತನರಿಗೆ ಕಲ್ಪಿಸಿದ್ದ ಶೇಕಡ 3 ರಷ್ಟು ಮೀಸಲಾತಿಯನ್ನು ಶೇಕಡ 4 ರಷ್ಟಕ್ಕೆ ಹೆಚ್ಚಿಸಲಾಗಿದೆ ಮತ್ತು ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಈಗಾಗಲೇ ಜಾರಿಯಲ್ಲಿರುವ ಶೇಕಡ 5ರಷ್ಟು ಸಮತಳ ಮೀಸಲಾತಿಯನ್ನು ಮುಂದುವರಿಸಲಾಗಿರುತ್ತದೆ. ಬದಲಾದ ಈ ಸನ್ನಿವೇಶದಲ್ಲಿ, ಮೇಲೆ ಓದಲಾದ ದಿನಾಂಕ: 01.08.2009ರ ಮತ್ತು 10.06.2013ರ ಆದೇಶಗಳನ್ನು ಮಾರ್ಪಡಿಸುವುದು ಅಗತ್ಯವಾಗಿರುತ್ತದೆ.

6. ಮುಂದುವರೆದು, ಈ ಮೊದಲು ವೃಂದ-ಸಿ ಮತ್ತು ವೃಂದ-ಡಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಧತ್ವ / ಮಂದದೃಷ್ಟಿ ಇರುವ ವ್ಯಕ್ತಿಗಳಿಗೆ ನೀಡಲಾಗುತ್ತಿದ್ದ ಶೇಕಡ 2 ರಷ್ಟು ಮೀಸಲಾತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಮೆದುಳಿನ ಪಾರ್ಶ್ವವಾಯು, ಕುಷ್ಠರೋಗ ನಿವಾರಿತ ವ್ಯಕ್ತಿಗಳು, ಕುಬ್ಜತೆ, ಆಸಿಡ್ ದಾಳಿಗೆ ತುತ್ತಾದವರು ಮತ್ತು ಬಹುವಿಧ ಸ್ನಾಯು ಸವೆತ ಒಳಗೊಂಡಂತೆ ಚಲನವಲನ ವೈಕಲ್ಯತೆ ಉಳ್ಳವರಿಗೆ ನೀಡಲು ಶಿಫಾರಸ್ಸು ಮಾಡಿರುತ್ತದೆ. ಇಲಾಖೆಯು 2001 ಮತ್ತು 2011 ರ ಜನಗಣತಿಯಲ್ಲಿ ಲಭ್ಯವಾದ ಅಂಗವೈಕಲ್ಯತೆವಾರು ದತ್ತಾಂಶವನ್ನು ತುಲನಾತ್ಮಕವಾಗಿ ಪರಿಗಣಿಸಿರುತ್ತದೆ. 1991 ರ ಜನಗಣತಿಯ ಸಂದರ್ಭದಲ್ಲಿ ಅಂಗವೈಕಲ್ಯತೆವಾರು ಗಣತಿ ನಡೆಸಿರುವುದಿಲ್ಲ. ರಾಜ್ಯದಲ್ಲಿ ದೃಷ್ಟಿದೋಷವುಳ್ಳ ಅಂಗವಿಕಲರ ಸಂಖ್ಯೆಯು 2001 ರ ಜನಗಣತಿಯ 4,40,875 ಕ್ಕೆ ಹೋಲಿಸಿದ್ದರೆ 2011 ರ ಜನಗಣತಿಯಲ್ಲಿ 2,64,170 ಕ್ಕೆ ಪರಿಣಾಮಕಾರಿಯಾಗಿ ಕುಸಿದಿರುತ್ತದೆ. ಆದರೆ ದೈಹಿಕ ಅಂಗವಿಕಲರ ಸಂಖ್ಯೆ 2001 ರಲ್ಲಿ 2,66,559 ಇದ್ದು, 2011 ರಲ್ಲಿ 2,71,982 ಕ್ಕೆ ಹೆಚ್ಚಳಗೊಂಡಿರುತ್ತದೆ. ಅಲ್ಲದೇ 'ಇತರೆ ಅಂಗವಿಕಲತೆ' ಮತ್ತು 'ಬಹುವಿಧದ ಅಂಗವಿಕಲತೆ' ಎಂಬ ವಿಭಾಗಗಳ ಅಡಿಯಲ್ಲಿಯೂ ಸಹ ದೈಹಿಕ ಅಂಗವಿಕಲ ವ್ಯಕ್ತಿಗಳನ್ನು ಪ್ರತ್ಯೇಕವಾಗಿ ಗಣತಿ ಮಾಡಲಾಗಿರುತ್ತದೆ. ಆದಕಾರಣ, ಇಲಾಖೆಯ ನಿರ್ದೇಶಕರು ದೈಹಿಕ ಅಂಗವಿಕಲರ ಒಟ್ಟು ಸಂಖ್ಯೆಯನ್ನು 4,45,348 ಎಂದು ಪರಿಗಣಿಸಬಹುದಾಗಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ. ಅಂದರೆ 2011 ರ ಜನಗಣತಿಯ ಸಂದರ್ಭದಲ್ಲಿ ಕರ್ನಾಟಕ

www.ksge.in

ರಾಜ್ಯದ ಒಟ್ಟು ಜನಸಂಖ್ಯೆ 6,10,95,297 ಆಗಿದ್ದು, ಅದರಲ್ಲಿ ಶೇಕಡ 0.43 ರಷ್ಟು ದೃಷ್ಟಿದೋಷವುಳ್ಳ ಅಂಗವಿಕಲರು ಹಾಗೂ ಶೇಕಡ 0.73 ರಷ್ಟು ದೈಹಿಕ ಅಂಗವಿಕಲರು ಇರುತ್ತಾರೆ.

ಮೇಲಿನ ಅಂಶಗಳನ್ನು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್‌ಆರ್‌ಆರ್ 2020**
**ಬೆಂಗಳೂರು, ದಿನಾಂಕ:25.09.2020**

7. ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಂಗವಿಕಲರಿಗೆ / ವಿಕಲಚೇತನರಿಗೆ ನಿಗದಿಪಡಿಸಿರುವ ಶೇಕಡ 5ರ ಸಮತಳ ಮೀಸಲಾತಿಯನ್ನು The Rights of Persons with Disabilities Act, 2016ರ ಕಲಂ 34(1)ರಲ್ಲಿ ಗೊತ್ತುಪಡಿಸಲಾದಂತೆ ಈ ಕೆಳಕಂಡ ವಿಕಲಚೇತನ ಅಭ್ಯರ್ಥಿಗಳಿಗಾಗಿ ಕೆಳಕಂಡ ಪ್ರಮಾಣದಲ್ಲಿ ಗುರುತಿಸತಕ್ಕದ್ದೆಂದು ಹಾಗೂ ಈ ಮೀಸಲಾತಿಯನ್ನು ಜಾರಿಗೊಳಿಸಲು ದಿನಾಂಕ:04.01.2008ರ ಆದೇಶ ಸಂಖ್ಯೆ: ಸಿಆಸುಇ 53 ಸನೆನಿ 2007 ರಲ್ಲಿ ನಿಗದಿಪಡಿಸಿರುವ 20 ಬಿಂದುಗಳ ರೋಸ್ಟರನ್ನು 100 ರಿಕ್ತ ಸ್ಥಾನಗಳಿಗೆ ಅನ್ವಯಿಸಿ, ಈ ಕೆಳಗೆ ಗುರುತಿಸಲಾದ ಬಿಂದುಗಳಲ್ಲಿ ಅನುಕ್ರಮವಾಗಿ ಮೀಸಲಿರಿಸತಕ್ಕದ್ದು ಎಂದು ಈ ಮೂಲಕ ಆದೇಶಿಸಲಾಗಿದೆ:

| ಕ್ರಮ ಸಂಖ್ಯೆ | ವೈಕಲ್ಯತೆಯ ಸ್ವರೂಪ | ಗುರುತಿಸಲಾದ ಶೇಕಡವಾರು | ಗುರುತಿಸಲಾದ ಬಿಂದು |
|---|---|---|---|
| 1 | Blindness and low vision | 1% | 4 |
| 2 | Locomotor disability including cerebral palsy, leprosy cured, dwarfism, acid attack victims and muscular dystrophy | 2% | 24 ಮತ್ತು 84 |
| 3 | Deaf and hard of hearing | 1% | 44 |
| 4 | Autism, intellectual disability, specific learning disability and mental illness | 1% | 64 |
| 5 | Multiple disabilities from amongst persons under clauses (a) to (d) including deaf-blindness in the posts identified for each disabilities | | |

8. ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ವಿಕಲಚೇತನರಿಗೆ ಕಲ್ಪಿಸಿರುವ ಶೇಕಡ 4 ರಷ್ಟು ಸಮತಳ ಮೀಸಲಾತಿಯನ್ನು The Rights of Persons with Disabilities Act, 2016ರ ಕಲಂ 34(1)ರಲ್ಲಿ ಗೊತ್ತುಪಡಿಸಲಾದಂತೆ ಈ ಕೆಳಕಂಡ ವಿಕಲಚೇತನ ಅಭ್ಯರ್ಥಿಗಳಿಗಾಗಿ ಕೆಳಕಂಡ ಪ್ರಮಾಣದಲ್ಲಿ ಗುರುತಿಸತಕ್ಕದ್ದೆಂದು ಹಾಗೂ ಈ ಮೀಸಲಾತಿಯನ್ನು ಜಾರಿಗೊಳಿಸಲು ದಿನಾಂಕ: 04.01.2008ರ ಆದೇಶ ಸಂಖ್ಯೆ: ಸಿಆಸುಇ 53 ಸನೆನಿ 2007ರಲ್ಲಿ ನಿಗದಿಪಡಿಸಿರುವ 20 ಬಿಂದುಗಳ ರೋಸ್ಟರನ್ನು 100 ರಿಕ್ತ ಸ್ಥಾನಗಳಿಗೆ ಅನ್ವಯಿಸಿ, ಈ ಕೆಳಗೆ ಗುರುತಿಸಲಾದ ಬಿಂದುಗಳಲ್ಲಿ ಅನುಕ್ರಮವಾಗಿ ಮೀಸಲಿರಿಸತಕ್ಕದ್ದು ಎಂದು ಈ ಮೂಲಕ ಆದೇಶಿಸಲಾಗಿದೆ:

www.ksge.in

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



| ಕ್ರಮ ಸಂಖ್ಯೆ | ವೈಕಲ್ಯತೆಯ ಸ್ವರೂಪ | ಗುರುತಿಸಲಾದ ಶೇಕಡವಾರು | ಗುರುತಿಸಲಾದ ಬಿಂದು |
|---|---|---|---|
| 1 | Blindness and low vision | 1% | 4 |
| 2 | Locomotor disability including cerebral palsy, leprosy cured, dwarfism, acid attack victims and muscular dystrophy | 1% | 24 |
| 3 | Deaf and hard of hearing | 1% | 44 |
| 4 | Autism, intellectual disability, specific learning disability and mental illness | 1% | 64 |
| 5 | Multiple disabilities from amongst persons under clauses (a) to (d) including deaf-blindness in the posts identified for each disabilities | | |

9. ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯತಕ್ಕದ್ದು (Carry forward). ಮುಂದಿನ ನೇಮಕಾತಿಯಲ್ಲಿಯೂ ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ನೇರ ಮೀಸಲಾತಿಯಡಿ ಬರುವ ಆಯಾ ಪ್ರವರ್ಗದ ಇತರ ಅಂಗವಿಕಲತೆಯುಳ್ಳ ಅರ್ಹ ಅಂಗವಿಕಲ ಅಭ್ಯರ್ಥಿಯಿಂದ ಭರ್ತಿ ಮಾಡತಕ್ಕದ್ದು. ಒಂದು ವೇಳೆ ಯಾವುದೇ ಅಂಗವಿಕಲ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ, ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳತಕ್ಕದ್ದೆಂದು ಎಲ್ಲ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

10. ಈ ಆದೇಶವು ಭವಿಷ್ಯವರ್ತಿಯಾಗಿ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ವಿ. ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-2).

www.ksge.in

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ...

ಅನುಬಂಧ-4

# ಕರ್ನಾಟಕ ಸಿವಿಲ್ ಸೇವಾ
# (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977

(iv) ಜನರ ವಿವಿಧ ವರ್ಗಗಳ ನಡುವೆ ಧರ್ಮ, ಜನಾಂಗ, ಭಾಷೆ, ಜಾತಿ ಅಥವಾ ಸಮುದಾಯ ಭಾವನೆಗಳ ಆಧಾರದ ಮೇಲೆ ಶತೃತ್ವವನ್ನು ಅಥವಾ ದ್ವೇಷವನ್ನು ಬೆಳೆಸುವಂಥ

– ಯಾವುದೇ ಚಟುವಟಿಕೆಯಲ್ಲಿ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದಿದ್ದರೆ ಅಥವಾ ಸಂಬಂಧ ಹೊಂದಿದ್ದರೆ; ಅಥವಾ

(ಸಿ) ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ವಜಾ ಆಗಿದ್ದರೆ;

(ಡಿ) ಕೇಂದ್ರ ಅಥವಾ ಯಾವುದೇ ರಾಜ್ಯ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆ ಅಥವಾ ಆಯ್ಕೆಗಳಿಗೆ ಹಾಜರಾಗಲು ಖಾಯಂ ಆಗಿ ನಿಷೇಧಿತನಾದಾಗ ಅಥವಾ ನಿಷೇಧಿತನಾಗಿದ್ದರೆ ಅಥವಾ ಅನರ್ಹನಾದಾಗ ಅಥವಾ ಅನರ್ಹಗೊಳಿಸಿದ್ದರೆ

– ರಾಜ್ಯ ಸಿವಿಲ್ ಸೇವೆಯ ನೇಮಕಕ್ಕೆ ಅರ್ಹರಾಗಿರತಕ್ಕದ್ದಲ್ಲ.

(7) ನೈತಿಕ ಅಧಃಪತನವನ್ನೊಳಗೊಂಡ ಅಪರಾಧಕ್ಕಾಗಿ ಅಪರಾಧ ನಿರ್ಣೀತನಾಗಿರುವ ಅಥವಾ ಅಪರಾಧ ನಿರ್ಣೀತನಾಗಿದ್ದ ಅಥವಾ ಕೇಂದ್ರ ಲೋಕಸೇವಾ ಆಯೋಗ ಅಥವಾ ಯಾವುದೇ ರಾಜ್ಯದ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆ ಅಥವಾ ಆಯ್ಕೆಗಳಿಗೆ ಹಾಜರಾಗುವುದರಿಂದ ತಾತ್ಕಾಲಿಕವಾಗಿ ನಿಷೇಧಿತನಾಗಿದ್ದ ಅಥವಾ ಅನರ್ಹನಾಗಿರುವ ಅಥವಾ ಅನರ್ಹನಾಗಿದ್ದ ಯಾರೇ ವ್ಯಕ್ತಿಯನ್ನು, ಸರ್ಕಾರವು ಎಲ್ಲಾ ಸನ್ನಿವೇಶಗಳನ್ನು ಅವಲೋಕನ ಮಾಡಿದ ತರುವಾಯ ಆತನು ಅಂಥ ನೇಮಕಾತಿಗೆ ಸೂಕ್ತನೆಂದು ಪರಿಗಣಿಸಿದ ಹೊರತು, ರಾಜ್ಯ ಸಿವಿಲ್ ಸೇವೆಗೆ ಸಾಮಾನ್ಯವಾಗಿ ನೇಮಕ ಮಾಡತಕ್ಕದ್ದಲ್ಲ.

**6. ನೇಮಕಕ್ಕೆ ವಯೋಮಿತಿ.–** [1][(1) ವಿಶೇಷವಾಗಿ ರಚಿಸಿದ ಮತ್ತು ಹೆಚ್ಚಿನ ವಯೋಮಿತಿಯನ್ನು ನಿಗದಿಪಡಿಸಿರುವ ಯಾವುದೇ ಸೇವೆ ಅಥವಾ ಹುದ್ದೆಗೆ ಅನ್ವಯಿಸುವ ನೌಕರಿ ಭರ್ತಿ ನಿಯಮಗಳಲ್ಲಿ ಅನ್ಯಥಾ ಉಪಬಂಧಿಸಿರುವುನ್ನುಳಿದು ನೇರ ನೌಕರಿ ಭರ್ತಿಯ ಮೂಲಕ ನೇಮಕ ಮಾಡಿಕೊಳ್ಳಬೇಕಾದ ಪ್ರತಿಯೊಬ್ಬ ಅಭ್ಯರ್ಥಿಯೂ ಹದಿನೆಂಟು ವರ್ಷ ವಯಸ್ಸಿನವನಾಗಿರತಕ್ಕದ್ದು; ಮತ್ತು ಅರ್ಜಿ ಸ್ವೀಕರಿಸುವುದಕ್ಕಾಗಿ ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಥವಾ ನೇಮಕ ಪ್ರಾಧಿಕಾರವು ನಿರ್ದಿಷ್ಟಪಡಿಸಬಹುದಾದ ಅಂಥ ಇತರ ದಿನಾಂಕದಂದು,–

[2][(ಎ) ಪರಿಶಿಷ್ಟ ಜಾತಿಗೆ ಮತ್ತು ಪರಿಶಿಷ್ಟ ಪಂಗಡಕ್ಕೆ ಅಥವಾ ಹಿಂದುಳಿದ ವರ್ಗಗಳ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಯಾದರೆ [3][ಮೂವತ್ತೆಂಟು ವರ್ಷ][3];

(ಬಿ) ಹಿಂದುಳಿದ ವರ್ಗಗಳ ಪ್ರವರ್ಗ –II (ಎ) ಅಥವಾ II (ಬಿ), III(ಎ) ಅಥವಾ III (ಬಿ)ಗೆ ಸೇರಿದ ಅಭ್ಯರ್ಥಿಯಾದರೆ [3][ಮೂವತ್ತಾರು ವರ್ಷ][3]; ಮತ್ತು

1. ಅಧಿಸೂಚನೆ ಸಂಖ್ಯೆ ಡಿಪಿಎಆರ್ 33 ಎಸ್‌ಎಸ್‌ಆರ್ 78, ದಿನಾಂಕ 31ನೇ ಮಾರ್ಚ್ 1979 ರಾಜ್ಯಪತ್ರ ದಿನಾಂಕ 5ನೇ ಏಪ್ರಿಲ್ 1979ರ ಮೂಲಕ ಪ್ರತಿಯೋಜಿಸಲಾಗಿದೆ.

2. ಅಧಿಸೂಚನೆ ಸಂಖ್ಯೆ ಡಿಪಿಎಆರ್ 4 ಎಸ್‌ಎಸ್‌ಆರ್ 95, ದಿನಾಂಕ 25ನೇ ಜುಲೈ 1995 ರಾಜ್ಯಪತ್ರ ದಿನಾಂಕ 10–8–95ರ ಮೂಲಕ ಪ್ರತಿಯೋಜಿಸಲಾಗಿದೆ.

3. ಅಧಿಸೂಚನೆ ಸಂಖ್ಯೆ ಡಿಪಿಎಆರ್ 21 ಎಸ್‌ಆರ್‌ಆರ್ 91, ದಿನಾಂಕ 30.10.1991ರ ಮೂಲಕ ಪ್ರತಿಯೋಜಿಸಲಾಗಿದೆ.

(ಸಿ) ಯಾರೇ ಇತರ ವ್ಯಕ್ತಿಯಾದರೆ [1][ಮೂವತ್ತ ಮೂರು ವರ್ಷ][1]

– ಮೀರಿದ ವಯಸ್ಸಿನವನಾಗಿರತಕ್ಕದ್ದಲ್ಲ.][2]

1. ಅಧಿಸೂಚನೆ ಸಂಖ್ಯೆ ಡಿಪಿಎಆರ್ 21 ಎಸ್‌ಆರ್‌ಆರ್ 91, ದಿನಾಂಕ 30.10.1991ರ ಮೂಲಕ ಪ್ರತಿಯೋಜಿಸಲಾಗಿದೆ.

[ಪರಂತು, ಮರಳಿ ದೇಶಕ್ಕೆ ಬಂದಿರುವ ಈ ಮುಂದಿನ ವ್ಯಕ್ತಿಗಳ ಪ್ರಕರಣಗಳಲ್ಲಿ ಕರ್ನಾಟಕ ಲೋಕಸೇವಾ ಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಮಾಡುವ ನೌಕರಿ ಭರ್ತಿಗೆ ಗರಿಷ್ಠ ವಯೋಮಿತಿಯನ್ನು ಮೂರು ಷ್ಟು ಮತ್ತು ಇತರ ನೌಕರಿ ಭರ್ತಿಗೆ ನಲವತ್ತೈದು ವರ್ಷಗಳವರೆಗೆ ಸಡಿಲಗೊಳಿಸತಕ್ಕದ್ದು ಮತ್ತು ಅವರಲ್ಲಿ ಪರಿಶಿಷ್ಟ ತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳಿಗೆ ಇದನ್ನು ಮತ್ತೆ ಐದು ವರ್ಷಗಳಷ್ಟು ಸಡಿಲಗೊಳಿಸತಕ್ಕದ್ದು, ಎಂದರೆ:-

(ಎ) 1ನೇ ಜನವರಿ 1964ರಂದು ಅಥವಾ ಆನಂತರ, ಆದರೆ 26ನೇ ಮಾರ್ಚ್ 1971ಕ್ಕಿಂತ ಮೊದಲು ಪೂರ್ವ ನ (ಈಗಿನ ಬಾಂಗ್ಲಾದೇಶ) ದಿಂದ ಭಾರತಕ್ಕೆ ವಲಸೆ ಬಂದ ಭಾರತೀಯ ಸಂಜಾತ ವ್ಯಕ್ತಿಗಳು;

(ಬಿ) 1ನೇ ಜೂನ್ 1963ರಂದು ಅಥವಾ ಆನಂತರ ಬರ್ಮಾದಿಂದ ವಲಸೆ ಬಂದ ಭಾರತೀಯ ಸಂಜಾತ ವ್ಯಕ್ತಿಗಳು 1ನೇ ನವೆಂಬರ್ 1964ರಂದು ಅಥವಾ ಆನಂತರ ಸಿಲೋನ್ (ಈಗಿನ ಶ್ರೀಲಂಕಾ)ದಿಂದ ತಾಯ್ನಾಡಿಗೆ ಬಂದವರು;

(ಸಿ) ಪೂರ್ವ ಆಫ್ರಿಕ ರಾಷ್ಟ್ರಗಳಾದ ಕೀನ್ಯಾ, ಉಗಾಂಡ ಮತ್ತು ಟಾಂಝಾನಿಯಾ ಸಂಯುಕ್ತ ಗಣರಾಜ್ಯಗಳಿಂದ ವಲಸೆ ಭಾರತೀಯ ಸಂಜಾತ ವ್ಯಕ್ತಿಗಳು;

(ಡಿ) ವಿಯಟ್ನಾಂನಿಂದ ವಲಸೆ ಬಂದ ಭಾರತೀಯ ಸಂಜಾತ ವ್ಯಕ್ತಿಗಳು][1].

[2][(2) ಯಾವುದೇ ಸೇವೆ ಅಥವಾ ಹುದ್ದೆಯ ನೌಕರಿ ಭರ್ತಿಗೆ (1)ನೇ ಉಪ-ನಿಯಮದಲ್ಲಿ ನಿಗದಿಪಡಿಸಿರುವ ಮಿತಿಗಳನ್ನು ಹೊರತುಪಡಿಸಿ ಗರಿಷ್ಠ ವಯೋಮಿತಿಗಳನ್ನು ನಿಗದಿಪಡಿಸಿದ್ದರೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರ ಳಿದ ವರ್ಗಗಳ ಪ್ರವರ್ಗ-I, ಪ್ರವರ್ಗ- II(ಎ), ಪ್ರವರ್ಗ- II(ಬಿ), ಪ್ರವರ್ಗ- III(ಎ), ಪ್ರವರ್ಗ- III(ಬಿ) ಗಳಿಗೆ ವ್ಯಕ್ತಿಗಳ ಸಂದರ್ಭದಲ್ಲಿ ಹೆಚ್ಚಿಸಿದ ವಯೋಮಿತಿಗಾಗಿ ನೌಕರಿ ಭರ್ತಿ ನಿಯಮಗಳನ್ನು ಉಪಬಂಧಿಸಿದ್ದ ಹೊರತು, ವಯೋಮಿತಿಯನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಥವಾ ಇತರ ಹಿಂದುಳಿದ ವರ್ಗಗಳ ಪ್ರವರ್ಗ- Iಕ್ಕೆ ಸೇರಿದ ಅಭ್ಯರ್ಥಿಯ ಸಂದರ್ಭದಲ್ಲಿ ಐದು ವರ್ಷಗಳಷ್ಟು ಮತ್ತು ಇತರ ಹಿಂದುಳಿದ ವರ್ಗಗಳ ಪ್ರವರ್ಗ-II (ಎ), ಪ್ರವರ್ಗ-), ಪ್ರವರ್ಗ-III (ಎ), ಅಥವಾ ಪ್ರವರ್ಗ-III (ಬಿ) ಗಳಿಗೆ ಸೇರಿದ ಯಾರೇ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ಗಳಷ್ಟು ಹೆಚ್ಚಿಸಲಾಗಿದೆಯೆಂದು ಭಾವಿಸತಕ್ಕದ್ದು][1].

ಚನೆ ಸಂಖ್ಯೆ ಡಿಪಿಎಆರ್ 25 ಎಸ್‌ಎಸ್‌ಆರ್ 80, ದಿನಾಂಕ 20ನೇ ಮೇ 1982 ರಾಜ್ಯಪತ್ರ ದಿನಾಂಕ 1ನೇ ಜುಲೈ 1982ರ ಮೂಲಕ ಸೇರಿಸಲಾಗಿದೆ.

ಚನೆ ಸಂಖ್ಯೆ ಡಿಪಿಎಆರ್ 4 ಎಸ್‌ಎಸ್‌ಆರ್ 95, ದಿನಾಂಕ 25ನೇ ಜುಲೈ 1995 ರಾಜ್ಯಪತ್ರ ದಿನಾಂಕ 10-8-95ರ ಮೂಲಕ ಪ್ರತಿಯೋಜಿಸಲಾಗಿದೆ.

[1][(2ಎ) ಯಾವುದೇ ಸೇವೆ ಅಥವಾ ಹುದ್ದೆಯ ನೌಕರಿ ಭರ್ತಿ ನಿಯಮಗಳಲ್ಲಿ ನಿರ್ದಿಷ್ಟಪಡಿಸಿರುವ ಗರಿಷ್ಠ ಮಿತಿಗಳು (1)ನೇ ಉಪನಿಯಮದಲ್ಲಿ ನಿಗದಿಪಡಿಸಿರುವುದಕ್ಕಿಂತ ಕಡಿಮೆಯಿದ್ದರೂ, ಸದರಿ (1)ನೇ ಉಪ-ನಿಯಮದಲ್ಲಿ ಷ್ಟಪಡಿಸಿರುವ ಗರಿಷ್ಠ ವಯೋಮಿತಿಗಳನ್ನು ಸದರಿ ಸೇವೆ ಅಥವಾ ಹುದ್ದೆಯ ನೌಕರಿ ಭರ್ತಿಗೆ ಸಂಬಂಧಿಸಿದಂತೆ ಲ್ಲಿ ನಿರ್ದಿಷ್ಟಪಡಿಸಿದ ವರ್ಗ ಅಥವಾ ವ್ಯಕ್ತಿಗಳ ಸಂಬಂಧದಲ್ಲಿ ಅನುಕ್ರಮವಾಗಿ ಗರಿಷ್ಠ ವಯೋಮಿತಿಗಳಾಗಿರುತ್ತವೆಂದು ಸತಕ್ಕದ್ದು.

ಉಳಿಸುವಿಕೆಗಳು.- ಈ ನಿಯಮಗಳು ಪ್ರಾರಂಭಕ್ಕೆ ಬಂದ ದಿನಾಂಕದಂದು ಸದರಿ ಸೇವೆಯಲ್ಲಿನ ಯಾವುದೇ ಸೇವೆ ಹುದ್ದೆಗೆ ನೌಕರಿ ಭರ್ತಿಯು ಬಾಕಿ ಉಳಿದಿದ್ದರೆ, ಅದನ್ನು ಈ ನಿಯಮಗಳು ಪ್ರಾರಂಭವಾಗುವುದಕ್ಕೆ ನಿಕಟಪೂರ್ವದಲ್ಲಿ ಯಲ್ಲಿದ್ದ ನಿಯಮಗಳಿಗನುಸಾರವಾಗಿ ಅಂತಿಮಗೊಳಿಸತಕ್ಕದ್ದು][1].

ಚನೆ ಸಂಖ್ಯೆ ಡಿಪಿಎಆರ್ 33, ಎಸ್‌ಆರ್‌ಆರ್ 78, ದಿನಾಂಕ 31-3-1979 ರಾಜ್ಯಪತ್ರ ದಿನಾಂಕ 5-4-1979ರ ಮೂಲಕ ಪ್ರತಿ ಯೋಜಿಸಲಾಗಿದೆ.

(3) (1)ನೇ ಉಪನಿಯಮದಲ್ಲಿ ಏನೇ ಒಳಗೊಂಡಿದ್ದರೂ, ನೇಮಕಕ್ಕೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವವಷ್ಟರಮಟ್ಟಿಗೆ ಹೆಚ್ಚಿಸಲಾಗಿದೆಯೆಂದು ಭಾವಿಸತಕ್ಕದ್ದು, ಎಂದರೆ:–

(ಎ) ಸಚಿವರ, ರಾಜ್ಯ ಸಚಿವರ ಅಥವಾ ಉಪ ಸಚಿವರ ಆಪ್ತ ಸಿಬ್ಬಂದಿಯ ಡಿ ಗುಂಪಿನ ಹುದ್ದೆಗೆ ನೇಮಕ ಮಾಡಿಕೊಳ್ಳುವ ಅಭ್ಯರ್ಥಿಯ ಸಂದರ್ಭದಲ್ಲಿ, ಅಂಥ ನೇಮಕವು, ಅಂಥ ಸಚಿವರ, ರಾಜ್ಯ ಸಚಿವರ ಅಥವಾ ಉಪ ಸಚಿವರ ಪದಾವಧಿಯು ಇರುವವರೆಗೆ ಮಾತ್ರ ಆಗಿದ್ದ ಪಕ್ಷದಲ್ಲಿ, ಐದು ವರ್ಷಗಳಷ್ಟು;

(ಬಿ) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ [1][ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ][1] ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣ ಮಾಡಿರುವಷ್ಟು ಅಥವಾ ಧಾರಣ ಮಾಡಿದ್ದಷ್ಟು ಅಥವಾ [2][ಹತ್ತು][2] ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು;

1. ಅಧಿಸೂಚನೆ ಸಂಖ್ಯೆ ಡಿಪಿಎಆರ್ 2, ಎಸ್‌ಆರ್‌ಆರ್ 77, ದಿನಾಂಕ 18.11.1980ರ ಮೂಲಕ ಪ್ರತಿಯೋಜಿಸಲಾಗಿದೆ.

2. ಅಧಿಸೂಚನೆ ಸಂಖ್ಯೆ ಡಿಪಿಎಆರ್ 39, ಎಸ್‌ಎಲ್‌ಸಿ 85(1), ದಿನಾಂಕ 5.9.1986ರ ಮೂಲಕ ಪ್ರತಿಯೋಜಿಸಲಾಗಿದೆ.

(ಸಿ) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

[1][**ಉಳಿಸುವಿಕೆಗಳು.**– ಸದರಿ ನಿಯಮಗಳಿಗೆ 2ನೇ ನಿಯಮದ ಮೂಲಕ ಮಾಡಿರುವ ತಿದ್ದುಪಡಿಯಲ್ಲಿ ಏನೇ ಇದ್ದರೂ, ಈ ನಿಯಮಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ ಜಾಹೀರಾತು ನೀಡಿರುವ ಯಾವುದೇ ಸೇವೆ ಅಥವಾ ಹುದ್ದೆಗೆ ಮಾಡುವ ನೌಕರಿ ಭರ್ತಿಯನ್ನು ಸದರಿ ನಿಯಮಗಳನ್ನು ಈ ನಿಯಮಗಳ ಮೂಲಕ ತಿದ್ದುಪಡಿ ಮಾಡಿರದಿದ್ದರೆ ಹೇಗೆ ಮಾಡಲಾಗುತ್ತಿತ್ತೋ ಹಾಗೆ ಮಾಡತಕ್ಕದ್ದು][1].

1. ಅಧಿಸೂಚನೆ ಸಂಖ್ಯೆ ಡಿಪಿಎಆರ್ 69, ಎಸ್‌ಆರ್‌ಆರ್ 76, ದಿನಾಂಕ 2-12-1980 ರ ಮೂಲಕ ಸೇರಿಸಲಾಗಿದೆ.

(ಡಿ) ಪೂರ್ಣಾವಧಿ ಕೆಡೆಟ್ ಇನ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್‌ಸ್ಟ್ರಕ್ಟರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು;

(ಇ) ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರಿಕೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್‌ಸ್ಪೆಕ್ಟರ್ ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್‌ಸ್ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು;

(ಎಫ್) ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ, ಹತ್ತು ವರ್ಷಗಳು;

(ಜಿ) ಮೈಸೂರಿನ ಮಾಜಿ ಮಹಾರಾಜರ ಸಿಬ್ಬಂದಿಯ ಸದಸ್ಯನಾಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಹಾಗೆ ಸದಸ್ಯನಾಗಿರುವಷ್ಟು ಅಥವಾ ಸದಸ್ಯನಾಗಿದ್ದಷ್ಟು ವರ್ಷಗಳು;

) ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣ ಮಾಡಿರುವಷ್ಟು ಅಥವಾ ದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು;

ಅಭ್ಯರ್ಥಿ ವಿಧವೆಯಾಗಿರುವಾಗ, ಹತ್ತು ವರ್ಷಗಳು;

ರಣೆ.– ಬಿಟ್ಟುಬಿಡಲಾಗಿದೆ][1]

) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ, ಹತ್ತು ವರ್ಷಗಳು][2];

ಡಿಪಿಎಆರ್ 37 ಎಸ್‌ಎಸ್‌ಆರ್ 77 ದಿನಾಂಕ 8-2-1979 ರಾಜ್ಯಪತ್ರ ದಿನಾಂಕ 22-2-1979ರ ಮೂಲಕ ಬಿಟ್ಟುಬಿಡಲಾಗಿದೆ.

ಡಿಪಿಎಆರ್ 58 ಎಸ್‌ಎಸ್‌ಆರ್ 80, ದಿನಾಂಕ 5-11-1982 ರಾಜ್ಯಪತ್ರ ದಿನಾಂಕ 22-12-1982ರ ಮೂಲಕ ಸೇರಿಸಲಾಗಿದೆ.

ನವದೆಹಲಿಯಲ್ಲಿರುವ ನಿವಾಸಿ ಆಯುಕ್ತರ ಕಚೇರಿಯಲ್ಲಿನ ಮತ್ತು ಕರ್ನಾಟಕ ಭವನದಲ್ಲಿನ ಬಿ ಗುಂಪಿಗೆ, ಸಿ ಗುಂಪಿನ ಹುದ್ದೆಯ ನೇಮಕಕ್ಕೆ ಅಭ್ಯರ್ಥಿಯಾಗಿರುವ ವ್ಯಕ್ತಿಯ ಸಂದರ್ಭದಲ್ಲಿ ಎಂಟು ವರ್ಷಗಳು;

1974ರ ಜೂನ್ 18ಕ್ಕೆ ಮುಂಚೆ ಯಾವುದೇ ಸೇವೆಗೆ ಅಥವಾ ಹುದ್ದೆಗೆ ಮಾಡಿರುವ ಯಾವುದೇ ನೇಮಕಕ್ಕೆ ತೆ (1) ರಿಂದ (3)ನೇ ಉಪನಿಯಮದ ಯಾವುದೇ ಉಪಬಂಧಗಳನ್ನು ಸಡಿಲಿಸುವುದು ಅಗತ್ಯವೆಂದು ಮತ್ತು ಸರ್ಕಾರವು ಅಭಿಪ್ರಾಯಪಟ್ಟರೆ ಅದನ್ನು ಲಿಖಿತದಲ್ಲಿ ದಾಖಲಿಸಿ, ಹಾಗೆ ಸಡಿಲಿಸಬಹುದು.

ಕಡ್ಡಾಯ ನಿವೃತ್ತಿಯ ದಿನಾಂಕದ ನಂತರ ಬಡ್ತಿ.– ಕಡ್ಡಾಯನಿವೃತ್ತಿಯ ಅಥವಾ ವಯೋನಿವೃತ್ತಿಯ ದಿನಾಂಕದ ಸೇವೆಯಲ್ಲಿ ಉಳಿಸಿಕೊಂಡಿರುವ ಯಾರೇ ಸರ್ಕಾರೀ ನೌಕರನಿಗೆ ಇನ್ನೊಂದು ಹುದ್ದೆಗೆ ಬಡ್ತಿ ನೀಡತಕ್ಕದ್ದಲ್ಲ:

ಂತು, ಸರ್ಕಾರಿ ಆದೇಶ ಸಂಖ್ಯೆ ಜಿಎಡಿ 3 ಡಿಟಿಬಿ 58 ದಿನಾಂಕ 14ನೇ ಆಗಸ್ಟ್ 1958 ಮತ್ತು 5ನೇ ನವೆಂಬರ್ ರ ಅನುಸಾರವಾಗಿ ಕಡ್ಡಾಯ ನಿವೃತ್ತಿಯ ಅಥವಾ ವಯೋ ನಿವೃತ್ತಿಯ ದಿನಾಂಕದ ನಂತರವೂ ಸೇವೆಯಲ್ಲಿ ರುವ ಸರ್ಕಾರಿ ನೌಕರನಿಗೆ ಈ ನಿಯಮದಲ್ಲಿರುವುದು ಯಾವುದೂ ಅನ್ವಯವಾಗತಕ್ಕದ್ದಲ್ಲ.

ಷ್ಟೂ ಪರಂತು, ಕರ್ನಾಟಕ ಸಿವಿಲ್ ಸೇವಾ ನಿಯಮಗಳ 95ನೇ ನಿಯಮದ (ಎ) ಖಂಡದ ಸಾರವಾಗಿ ತಿಂಗಳಿನ ಕೊನೆ ದಿನದವರೆಗೆ ಸೇವೆಯಲ್ಲಿ ಇರಿಸಿಕೊಂಡಿರುವ ಸರ್ಕಾರಿ ನೌಕರನಿಗೆ ಈ ವುದು ಯಾವುದೂ ಅನ್ವಯವಾಗತಕ್ಕದ್ದಲ್ಲ][1].

ಡಿಪಿಎಆರ್ 44, ಎಸ್‌ಆರ್‌ಆರ್ 80, ದಿನಾಂಕ 6.1.1981ರ ಮೂಲಕ ಸೇರಿಸಲಾಗಿದೆ.

ನೇಮಕಾತಿಗಳು ಅಥವಾ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಉಪಬಂಧ.– [1][ಬಿಟ್ಟುಬಿಡಲಾಗಿದೆ][1] ಪರಿಶಿಷ್ಟ ಶಿಷ್ಟ ಪಂಗಡಗಳ ಮತ್ತು ಇತರೆ ಹಿಂದುಳಿದ ವರ್ಗಗಳ ಸದಸ್ಯರಿಗೆ ಭಾರತ ಸಂವಿಧಾನದ 16ನೇ ಅನುಚ್ಛೇದದ ದ ಅಡಿಯಲ್ಲಿ ನಿಗದಿಪಡಿಸಿರುವ ಪ್ರಮಾಣದಷ್ಟು ಮತ್ತು ರೀತಿಗನುಸಾರವಾಗಿ ನೇಮಕಗಳನ್ನು ಅಥವಾ ಮೀಸಲಿರಿಸತಕ್ಕದ್ದು:

ಡಿಪಿಎಆರ್ 28 ಎಸ್‌ಎಸ್‌ಆರ್ 95 ದಿನಾಂಕ 21.10.1995ರ ಮೂಲಕ ಬಿಟ್ಟುಬಿಡಲಾಗಿದೆ.

ಂತು, ಯಾವುದೇ ಸೇವೆಯ ಅಥವಾ ಹುದ್ದೆಯ ಸಂಬಂಧದಲ್ಲಿ ವಿಶೇಷವಾಗಿ ರಚಿಸಲಾದ ನೌಕರಿ ಭರ್ತಿ ಏನೇ ಇದ್ದರೂ ಬಡ್ತಿ ಕೋಟಾದಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು 1978ರ ಏಪ್ರಿಲ್ 27ರಿಂದ ಂತೆ ನಿರ್ಧರಿಸತಕ್ಕದ್ದು ಮತ್ತು ಅನುಷ್ಠಾನಗೊಳಿಸತಕ್ಕದ್ದು.